**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 33 |
| ಸದಸ್ಯರ ಹೆಸರು | : | ಶ್ರೀ. ಪ್ರಕಾಶ್ ಕೆ.ರಾಥೋಡ್ |
| ಉತ್ತರಿಸುವ ದಿನಾಂಕ | : | 07/12/2020 |
| ಉತ್ತರಿಸುವ ಸಚಿವರು | : | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಸ್ಟೆಲ್ ಹೀಗೆ ಜಾತಿ ಹೆಸರಿನಲ್ಲಿ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಿದ್ದು ಸರ್ಕಾರದಿಂದಲೇ ಸಮಾಜಕ್ಕೆ ವ್ಯತಿರಕ್ತ ಸಂದೇಶ ಕಳುಹಿಸಿದಂತಾಗುತ್ತದೆಂದು ಭಾವಿಸಿ ಸರ್ಕಾರವು ತಾಲ್ಲೂಕಿಗೆ ಒಂದು ಜನರಲ್ ಹಾಸ್ಟೆಲ್ ಸ್ಥಾಪಿಸಲಾಗುವುದೆಂದು ವರದಿಯಾಗಿದ್ದು ನಿಜವೇ; | 2019-20ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 164 ರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ/ಅಲ್ಪ ಸಂಖ್ಯಾತರು ಮತ್ತು ಸಾಮಾನ್ಯ ವರ್ಗದ ಎಲ್ಲಾ ವಿದ್ಯಾರ್ಥಿಗಳಿಗೆ 30 ಸಂಯುಕ್ತ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಗುವುದು ಎಂದು ಘೋಷಿಸಲಾಗಿದೆ.<br><br>ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಜಿಲ್ಲೆಗೆ ಒಂದರಂತೆ 30 ಸಂಯುಕ್ತ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸಹಮತಿ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು. ಆರ್ಥಿಕ ಇಲಾಖೆಯು "ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಸರ್ಕಾರದ ರಾಜಸ್ವ ಸಂಗ್ರಹ ಕಡಿಮೆಯಿದ್ದು ಪ್ರಸಕ್ತ ಆರ್ಥಿಕ ಸನ್ನಿವೇಶದಲ್ಲಿ ಹೆಚ್ಚುವರಿ ಅನುದಾನ ಒದಗಿಸಲು ಸಾಧ್ಯವಿರುವುದಿಲ್ಲ. ಆದುದರಿಂದ ಪ್ರಸ್ತಾಪಿತ ಯೋಜನೆಯನ್ನು ತಾತ್ಕಾಲಿಕವಾಗಿ 2 ವರ್ಷಗಳ ಕಾಲ ಮುಂದೂಡುವಂತೆ ತಿಳಿಸಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಹಾಸ್ಟೆಲ್‌ಗಳ ನಿರ್ವಹಣೆಯ ಜವಾಬ್ದಾರಿ ಯಾರಿಗೆ ಇರುತ್ತದೆ; | |
| ಇ) | ಈ ಹಾಸ್ಟೆಲ್‌ಗಳ ಪ್ರವೇಶಾತಿಗಾಗಿ ಅನುಸರಿಸುವ ಮಾನದಂಡಗಳೇನು; ಯಾವ ಆಧಾರದ ಮೇಲೆ ಮತ್ತು ಎಷ್ಟು ಜಾತಿ ಜನರಿಗೆ ಪ್ರವೇಶಾತಿಯನ್ನು ನೀಡಲಾಗುವುದು? (ವಿವರ ನೀಡುವುದು) | |

ಸಕಇ 461 ಪಕವಿ 2020

(ಬಿ. ಶ್ರೀರಾಮುಲು)
ಮಾನ್ಯ ಸಮಾಜ ಕಲ್ಯಾಣ ಸಚಿವರು